# ಸಮಗ್ರ ಶಿಕ್ಷಣ ಕರ್ನಾಟಕ

ರಾಜ್ಯ ಯೋಜನಾ ನಿರ್ದೇಶಕರು ಕಛೇರಿ, ಹೊಸ ಸಾರ್ವಜನಿಕ ಕಛೇರಿ
ಪೂರಕ ಕಟ್ಟಡಗಳು ಕೆ.ಆರ್.ಸರ್ಕಲ್, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ: ಸಶಿಕ/ಆವಿ/6ನೇ ತ.ದಾ/2018-19/2023-24 ದಿನಾಂಕ: 15-06-2023

## ಸುತ್ತೋಲೆ

**ವಿಷಯ:** 2023-24ನೇ ಸಾಲಿನ ಆದರ್ಶ ವಿದ್ಯಾಲಯಗಳಲ್ಲಿ 7, 8 ಮತ್ತು 9ನೇ ತರಗತಿಗಳಿಗೆ ಖಾಲಿ ಇರುವ ಸೀಟುಗಳಿಗೆ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಳ್ಳುವ ಬಗ್ಗೆ.

**********

ಕರ್ನಾಟಕ ರಾಜ್ಯದ 21 ಜಿಲ್ಲೆಗಳ 74 ತಾಲ್ಲೂಕುಗಳಲ್ಲಿ 6ನೇ ತರಗತಿಯಿಂದ ಆಂಗ್ಲ ಮಾಧ್ಯಮದಲ್ಲಿ ಪ್ರತಿ ತರಗತಿಗೆ ಗರಿಷ್ಠ 80 ವಿದ್ಯಾರ್ಥಿಗಳ ದಾಖಲಾತಿಯೊಂದಿಗೆ ಆದರ್ಶ ವಿದ್ಯಾಲಯ ಶಾಲೆಗಳನ್ನು ತೆರೆಯಲಾಗಿರುತ್ತದೆ. ಈ ಶಾಲೆಗಳಲ್ಲಿ 6 ರಿಂದ 10ನೇ ತರಗತಿಯವರೆಗೆ ತರಗತಿಗಳು ನಡೆಯುತ್ತಿವೆ. ಕಾರಣಾಂತರದಿಂದ 7, 8 ಮತ್ತು 9ನೇ ತರಗತಿಗಳಲ್ಲಿ ಕೆಲವು ಸೀಟುಗಳು 2023-24ನೇ ಸಾಲಿನಲ್ಲಿ ಖಾಲಿ ಇರುವ ಸೀಟುಗಳನ್ನು ಭರ್ತಿ ಮಾಡಿಕೊಳ್ಳಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮತಿ ನೀಡಲಾಗಿದೆ. 10ನೇ ತರಗತಿ ಪಬ್ಲಿಕ್ ಪರೀಕ್ಷೆಯಾಗಿರುವುದರಿಂದ 10ನೇ ತರಗತಿಯಲ್ಲಿರುವ ಖಾಲಿ ಸೀಟುಗಳ ಭರ್ತಿ ಮಾಡುವುದನ್ನು ಸ್ಥಗಿತಗೊಳಿಸಲಾಗಿದೆ.

1. ಸಂಬಂಧಪಟ್ಟ ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕರು ಖಾಲಿ ಇರುವ ಸೀಟುಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಅನುಮೋದನೆ ಪಡೆದು, ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಿಸಿ ವ್ಯಾಪಕ ಪ್ರಚಾರದೊಂದಿಗೆ ಅರ್ಜಿಗಳನ್ನು ಆಹ್ವಾನಿಸಿ ಪ್ರವೇಶ ಬಯಸಿ ಬಂದಂತಹ ಅರ್ಜಿಗಳನ್ನು ಕ್ರೋಢೀಕರಿಸಿ ಜಿಲ್ಲೆಯ ಡಯಟ್ ಪ್ರಾಂಶುಪಾಲರಿಗೆ ಪಟ್ಟಿಯನ್ನು ಸಲ್ಲಿಸುವುದು.
2. ಸಂಬಂಧಪಟ್ಟ ಆದರ್ಶ ವಿದ್ಯಾಲಯಗಳ ಮುಖ್ಯ ಶಿಕ್ಷಕರು ಎಸ್‌ಎಸ್‌ಕೆ ಕಛೇರಿಯಿಂದ ನೀಡಲಾಗುವ Google spread sheet ನಲ್ಲಿ 7, 8 ಮತ್ತು 9ನೇ ತರಗತಿಗಳಲ್ಲಿನ ಖಾಲಿ ಸ್ಥಾನಗಳ ಬಗ್ಗೆ ಮಾಹಿತಿ ನಮೂಧಿಸುವುದು.
3. ಆದರ್ಶ ವಿದ್ಯಾಲಯದ ಪ್ರವೇಶ ಪರೀಕ್ಷೆಯಂತೆ ಆಯಾ ತರಗತಿಗನುಗುಣವಾಗಿ ವಿಷಯಗಳನ್ನೊಳಗೊಂಡ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸುವುದು, ಉತ್ತರ ಪತ್ರಿಕೆಗಳ ಮೌಲ್ಯ ಮಾಪನ ಮತ್ತು ಫಲಿತಾಂಶವನ್ನು ಪ್ರಕಟಗೊಳಿಸುವುದು ನಂತರ ಫಲಿತಾಂಶದ ಪಟ್ಟಿಯನ್ನು

ಸಂಬಂಧಪಟ್ಟ ಆದರ್ಶ ವಿದ್ಯಾಲಯದ ಮುಖ್ಯ ಶಿಕ್ಷಕರಿಗೆ ನೀಡುವುದು ಈ ಕಾರ್ಯವನ್ನು **ಆಯಾ ಜಿಲ್ಲೆಯ ಪ್ರಾಂಶುಪಾಲರು ಡಯಟ್ ರವರು** ಕ್ರಮವಹಿಸುವುದು ಮತ್ತು ಪರೀಕ್ಷಾ ಗೌಪ್ಯತೆಯನ್ನು ಕಡ್ಡಾಯವಾಗಿ ಪಾಲಿಸುವುದು.

ಸದರಿ ಪರೀಕ್ಷಾ ಕಾರ್ಯದ ವೆಚ್ಚವನ್ನು ಕೆಳಕಂಡಂತೆ ಭರಿಸುವುದು

| ಕ್ರ.ಸಂ. | ವಿವರ | ಝೆರಾಕ್ಸ್ | ಕಛೇರಿ ಸಾದಿಲ್ವಾರು (1ಕೇಂದ್ರಕ್ಕೆ) | ಮುಖ್ಯ ಅಧೀಕ್ಷಕರು | ಕೊಠಡಿ ಮೇಲ್ವಿಚಾರಕರು | ಸಹಾಯಕ | ಗ್ರೂಪ್–ಡಿ | ಮೌಲ್ಯ ಮಾಪನ |
|---|---|---|---|---|---|---|---|---|
| 1 | ಒಂದು ಪ್ರಶ್ನೆ ಪ್ರತಿಕೆ ಸಿದ್ಧತೆ ರೂ. 100/– | 1 ಪುಟಕ್ಕೆ ರೂ. 2/– | ರೂ. 300/– | ರೂ. 100/– | ರೂ. 75/– | ರೂ. 50/– | ರೂ. 50/– | ಒಂದು ಉತ್ತರ ಪತ್ರಿಕೆಗೆ ರೂ. 10/– |

ಪರೀಕ್ಷೆಯ ವಿವರಗಳು:

- 7ನೇ ತರಗತಿಗೆ ಪ್ರಶ್ನೆ ಪತ್ರಿಕೆಯು 4 ರಿಂದ 6ನೇ ತರಗತಿ ರಾಜ್ಯ ಪಠ್ಯ ಪುಸ್ತಕಗಳನ್ನು ಆಧರಿಸಿ ಕನ್ನಡ (16%), ಆಂಗ್ಲಭಾಷೆ (16%), ಗಣಿತ(16%), ವಿಜ್ಞಾನ(16%), ಸಮಾಜ ವಿಜ್ಞಾನ(16%), ಸಾಮಾನ್ಯ ಜ್ಞಾನ (ಜನರಲ್ ನಾಲೇಜ್)(10%) ಮತ್ತು ಸಾಮಾನ್ಯ ಬೌದ್ಧಿಕ ಸಾಮರ್ಥ್ಯ (10%)–ಇವುಗಳನ್ನು ಪರಿಗಣಿಸಲಾಗುವುದು. ಪ್ರಶ್ನೆ ಪತ್ರಿಕೆಯು ವಸ್ತುನಿಷ್ಠ **(objective type)** ಪ್ರಶ್ನೆಗಳನ್ನು ಹೊಂದಿದ್ದು, ಆಂಗ್ಲ ಮತ್ತು ಕನ್ನಡ ಮಾಧ್ಯಮಗಳಲ್ಲಿರುತ್ತವೆ. ಪರೀಕ್ಷೆಯಲ್ಲಿ ಒಂದು ಪ್ರಶ್ನೆಗೆ ತಲಾ 01 ಅಂಕದಂತೆ ಇದ್ದು 100 ಪ್ರಶ್ನೆಗಳಿರುತ್ತವೆ.
- 8ನೇ ತರಗತಿಗೆ ಪ್ರಶ್ನೆ ಪತ್ರಿಕೆಯು 5 ರಿಂದ 7ನೇ ತರಗತಿ ರಾಜ್ಯ ಪಠ್ಯ ಪುಸ್ತಕಗಳನ್ನು ಆಧರಿಸಿ ಕನ್ನಡ (16%), ಆಂಗ್ಲಭಾಷೆ (16%), ಗಣಿತ(16%), ವಿಜ್ಞಾನ(16%), ಸಮಾಜ ವಿಜ್ಞಾನ(16%), ಸಾಮಾನ್ಯ ಜ್ಞಾನ (ಜನರಲ್ ನಾಲೇಜ್)(10%) ಮತ್ತು ಸಾಮಾನ್ಯ ಬೌದ್ಧಿಕ ಸಾಮರ್ಥ್ಯ (10%)–ಇವುಗಳನ್ನು ಪರಿಗಣಿಸಲಾಗುವುದು. ಪ್ರಶ್ನೆ ಪತ್ರಿಕೆಯು ವಸ್ತುನಿಷ್ಠ **(objective type)** ಪ್ರಶ್ನೆಗಳನ್ನು ಹೊಂದಿದ್ದು, ಆಂಗ್ಲ ಮತ್ತು ಕನ್ನಡ ಮಾಧ್ಯಮಗಳಲ್ಲಿರುತ್ತವೆ. ಪರೀಕ್ಷೆಯಲ್ಲಿ ಒಂದು ಪ್ರಶ್ನೆಗೆ ತಲಾ 01 ಅಂಕದಂತೆ ಇದ್ದು 100 ಪ್ರಶ್ನೆಗಳಿರುತ್ತವೆ.
- 9ನೇ ತರಗತಿ ಪ್ರಶ್ನೆ ಪತ್ರಿಕೆಯು 6 ರಿಂದ 8ನೇ ತರಗತಿ ರಾಜ್ಯ ಪಠ್ಯ ಪುಸ್ತಕಗಳನ್ನು ಆಧರಿಸಿ ಕನ್ನಡ (16%), ಆಂಗ್ಲಭಾಷೆ (16%), ಗಣಿತ(16%), ವಿಜ್ಞಾನ(16%), ಸಮಾಜ ವಿಜ್ಞಾನ(16%), ಸಾಮಾನ್ಯ ಜ್ಞಾನ (ಜನರಲ್ ನಾಲೇಜ್)(10%) ಮತ್ತು ಸಾಮಾನ್ಯ ಬೌದ್ಧಿಕ ಸಾಮರ್ಥ್ಯ (10%)–ಇವುಗಳನ್ನು ಪರಿಗಣಿಸಲಾಗುವುದು. ಪ್ರಶ್ನೆ ಪತ್ರಿಕೆಯು ವಸ್ತುನಿಷ್ಠ **(objective type)** ಪ್ರಶ್ನೆಗಳನ್ನು ಹೊಂದಿದ್ದು,

ಆಂಗ್ಲ ಮತ್ತು ಕನ್ನಡ ಮಾಧ್ಯಮಗಳಲ್ಲಿರುತ್ತವೆ. ಪರೀಕ್ಷೆಯಲ್ಲಿ ಒಂದು ಪ್ರಶ್ನೆಗೆ ತಲಾ 01 ಅಂಕದಂತೆ ಇದ್ದು 100 ಪ್ರಶ್ನೆಗಳಿರುತ್ತವೆ.

4. ಸದರಿ ದಾಖಲಾತಿಯಲ್ಲಿ ಕರ್ನಾಟಕ ರಾಜ್ಯದ ಮೀಸಲಾತಿ ನಿಯಮವನ್ನು ಅನುಸರಿಸತಕ್ಕದ್ದು. ಆಯಾ ವರ್ಗದಲ್ಲಿ ಖಾಲಿ ಇರುವ ಸೀಟುಗಳಿಗೆ ಆಯಾ ವರ್ಗದವರನ್ನೇ ಭರ್ತಿ ಮಾಡುವುದು.
5. ಡಯಟ್ ಪ್ರಾಂಶುಪಾಲರು ಸಂಬಂಧಪಟ್ಟ ತಾಲ್ಲೂಕುಗಳಿಗೆ ಡಯಟ್‌ನಿಂದ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಿಸುವುದು.
6. ಪ್ರವೇಶ ಪರೀಕ್ಷೆಯಲ್ಲಿ, ಮೌಲ್ಯಮಾಪನದಲ್ಲಿ ಹಾಗೂ ದಾಖಲಾತಿ ಪ್ರಕ್ರಿಯೆಯಲ್ಲಿ ಯಾವುದೇ ಲೋಪದೋಷಗಳಾಗದಂತೆ ಸಂಬಂಧಪಟ್ಟ ಮುಖ್ಯ ಶಿಕ್ಷಕರು, ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಯಟ್‌ನ ಆಯಾ ತಾಲ್ಲೂಕಿನ ನೋಡಲ್ ಅಧಿಕಾರಿಗಳು ಹಾಗೂ ಡಯಟ್‌ನ ಪ್ರಾಂಶುಪಾಲರು ಕ್ರಮವಹಿಸುವುದು.
7. ಮೇಲ್ಕಂಡ ದಾಖಲಾತಿ ಪ್ರಕ್ರಿಯೆಯನ್ನು ಜುಲೈ-2023ರೊಳಗೆ ಪೂರ್ಣಗೊಳಿಸುವುದು.
8. ಆದರ್ಶ ವಿದ್ಯಾಲಯಗಳಲ್ಲಿ 7, 8 ಮತ್ತು 9ನೇ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಪ್ರತಿ ತರಗತಿಗೆ 80ನ್ನು ಮೀರಿರಬಾರದು.
9. ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಯೋಜನಾಧಿಕಾರಿಗಳು ಎಸ್‌ಎಸ್‌ಕೆ ಮತ್ತು ಜಿಲ್ಲಾ ಉಪ ಯೋಜನಾ ಸಮನ್ವಯಾಧಿಕಾರಿಗಳು ಇವರು ಈ ಪ್ರಕ್ರಿಯೆಯಲ್ಲಿ ಸಂಪೂರ್ಣ ಸಹಕಾರ ನೀಡುವುದು.

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ – ಕರ್ನಾಟಕ
ಬೆಂಗಳೂರು

15/6

**ಪ್ರತಿಯನ್ನು ಸೂಕ್ತ ಮತ್ತು ಅಗತ್ಯ ಕ್ರಮಕ್ಕಾಗಿ:**

1. ಸಂಬಂಧಪಟ್ಟ ಉಪನಿರ್ದೇಶಕರು (ಆ), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
2. ಸಂಬಂಧಪಟ್ಟ ಉಪನಿರ್ದೇಶಕರು (ಅಭಿವೃದ್ಧಿ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
3. ಸಂಬಂಧಪಟ್ಟ ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳು, ಆರ್.ಎಂ.ಎಸ್.ಎ., ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
4. ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
5. ಸಂಬಂಧಪಟ್ಟ ಆದರ್ಶ ವಿದ್ಯಾಲಯ ಶಾಲೆಯ ಮುಖ್ಯೋಪಾಧ್ಯಾಯರುಗಳಿಗೆ.
6. ಕಛೇರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ಅಪರ ಆಯುಕ್ತರು ಶಾ.ಶಿ.ಇ, ಧಾರವಾಡ ಮತ್ತು ಗುಲ್ಬರ್ಗಾ.